## ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂಗಳವರ ನ್ಯಾಯಾಲಯ, ಕಡೂರು ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ

## ಎಂ.ವಿ.ಸಿ.ನಂ. 107/2020

ಆರ್‌ಡಬ್ಲ್ಯೂ: 1

ದಿನಾಂಕ 19-07-2024 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ: 3 ನೇ ಎದುರುದಾರರ ಪರ: ಶ್ರೀ ಕೆ ಎ ವಕೀಲರಿಂದ:

ನಾನು ಈ ಅರ್ಜಿಯಲ್ಲಿ 3 ನೇ ಎದುರುದಾರರ ಕಂಪನಿಯಲ್ಲಿ ಸಹಾಯಕ ವ್ಯವಸ್ಥಾಪಕನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಹೇಳಿಕೆ ಸಾಕ್ಷ್ಯ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯವೆಲ್ಲಾ ಸತ್ಯವಾಗಿರುತ್ತದೆ. ಅದನ್ನು ಓದಿ ನೋಡಿ ಸಹಿ ಮಾಡಿರುತ್ತೇನೆ.

ಕಂಪನಿಯವರು ನೀಡಿರುವ ಆತರೈಸೇಷನ್ ಲೆಟರನ್ನು ಹಾಜರುಪಡಿಸಿದ್ದು ಅದನ್ನು ನಿಆರ್-1 ಎಂದು, ವಿಮಾ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್-2 ಎಂದು, ದೋಷಾರೋಪಣಾ ಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಆರ್-3 ಎಂದು, ಸ್ಥಳ ಮಹಜರಿನ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಆರ್-4 ಎಂದು, ಐಎಂವಿ ವರದಿಯ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಆರ್-5 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿದಾರರ ಅರ್ಜಿಯನ್ನು ವಜಾ ಮಾಡಬೇಕಾಗಿ ಕೇಳಿಕೊಳ್ಳುತ್ತೇನೆ.

ಪಾಟೀ ಸವಾಲುಃ ಅರ್ಜಿದಾರರ ಪರಃ ಶ್ರೀ ಸಿ ವಿ ಎಸ್ ವಕೀಲರಿಂದಃ

ಈ ಪ್ರಕರಣಕ್ಕೆ ಸಂಬಂದಪಟ್ಟಂತೆ ನಮ್ಮ ಸಂಸ್ಥೆಯಿಂದ ಯಾವುದೇ ಸರ್ವೆ ಮಾಡಿಸಿರುವುದಿಲ್ಲ, ಆದರೆ ದಾಖಲೆಗಳನ್ನು ಮಾತ್ರ ಪಡೆಯಲಾಗಿದೆ. ಪ್ರಸ್ತುತ ಪ್ರಕರಣ ದಾಖಲಿಸುವ ಸಮಯದಲ್ಲಿ ಅರ್ಜಿದಾರರು ಕಡೂರಿನಲ್ಲಿ ವಾಸ ಇರಲಿಲ್ಲ ಎಂದು ತೋರಿಸಲು ನನ್ನ ಬಳಿ ದಾಖಲೆಗಳು ಇವೆಯಾ ಎಂದರೆ ಸಾಕ್ಷಿ ಯಾವುದೇ ದಾಖಲಾತಿ ಇರುವುದಿಲ್ಲ, ಆದರೆ ಅರ್ಜಿದಾರರು ತಮ್ಮ ಸಾಕ್ಷ್ಯ ವಿಚಾರಣೆಯ ಸಮಯದಲ್ಲಿ ಸದರಿ ವಿಚಾರವನ್ನು ಒಪ್ಪಿಕೊಂಡಿರುತ್ತಾರೆ ಎಂದು ನುಡಿದಿರುತ್ತಾರೆ. ಅರ್ಜಿದಾರರು ತಮ್ಮ ಸಾಕ್ಷ್ಯದಲ್ಲಿ ಕಡೂರಿನಲ್ಲಿ ವಾಸ ಇಲ್ಲ ಎಂದು ನುಡಿದಿದ್ದಾರಾ ಎಂದರೆ ಸಾಕ್ಷಿ ಇಲ್ಲವೆಂದು ನುಡಿದಿರುತ್ತಾರೆ. ಯಾವ ದಾಖಲೆಯ ಆಧಾರದ ಮೇಲೆ ಅರ್ಜಿದಾರರು ಕಡೂರಿನಲ್ಲಿ ವಾಸ ಇರುವುದಿಲ್ಲ ಎಂದು ನನ್ನ ಮುಖ್ಯ ವಿಚಾರಣೆಯ ನಾಲ್ಕನೇ ಖಂಡಿಕೆಯಲ್ಲಿ ಹೇಳಿರುತ್ತೀರಾ ಎಂದರೆ ಸಾಕ್ಷಿ ಅವರ ಆಧಾರ್ ಕಾರ್ಡಿನಲ್ಲಿ ಭದ್ರಾವತಿ ವಿಳಾಸ ಇದೆ ಎಂದು ನುಡಿದಿರುತ್ತಾರೆ. ಸದರಿ ಆಧಾರ್ ಕಾರ್ಡನ್ನು ನಾನು ಹಾಜರುಪಡಿಸಿರುತ್ತೇನಾ ಎಂದರೆ ಸಾಕ್ಷಿ ಇಲ್ಲವೆಂದು ನುಡಿದಿರುತ್ತಾರೆ.

2. 1 ನೇ ಎದುರುದಾರರು ತನ್ನ ತಪ್ಪಿನಿಂದಲೇ ಅಪಘಾತವಾಗಿದೆ ಎಂದು ತಪ್ಪು ಒಪ್ಪಿಕೊಂಡು ನ್ಯಾಯಾಲಯದಲ್ಲಿ ದಂಡ ಪಾವತಿ ಮಾಡಿರುವ ವಿಚಾರ ನನಗೆ ಗೊತ್ತಿದೆಯಾ ಎಂದರೆ ಸಾಕ್ಷಿ ಇಲ್ಲವೆಂದು ನುಡಿದಿರುತ್ತಾರೆ. ಗುರುಮೂರ್ತಿರವರು ತನ್ನ ತಪ್ಪಿನಿಂದ ಅಪಘಾತವಾಗಿರುವುದಿಲ್ಲವೆಂದು ಕ್ರಿಮಿನಲ್ ಪ್ರಕರಣದಲ್ಲಿ ಕಂಟೆಸ್ಟ್ ಮಾಡುತ್ತಿರುವ ವಿಚಾರ ಗೊತ್ತಿದೆಯಾ ಎಂದರೆ ಸಾಕ್ಷಿ ಇಲ್ಲವೆಂದು ನುಡಿದಿರುತ್ತಾರೆ. ಅರ್ಜಿದಾರರು ಬೈಕಿನಲ್ಲಿ ಹಿಂಬದಿ ಸವಾರರಾಗಿದ್ದರು ಎಂದರೆ ಸರಿ. ಕೆಎ-51 ಬಿ-1079 ರ

ವಾಹನದ ಚಾಲಕನ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಾಗಿದೆ ಎಂದರೆ ಸಾಕ್ಷಿ ಎರಡು ವಾಹನಗಳ ಚಾಲಕರ ಮೇಲೆ ದೋಷಾರೋಪಣಾ ಪಟ್ಟಿ ಸಲ್ಲಿಸಲಾಗಿದೆ ಎಂದು ನುಡಿದಿರುತ್ತಾರೆ. ಕೆಎ-14 ಇಜೆ-3015 ರ ವಾಹನದ ಚಾಲಕನ ತಪ್ಪಿನಿಂದ ಅಪಘಾತವಾಗಿಲ್ಲವೆಂದು ಕ್ರಿಮಿನಲ್ ಪ್ರಕರಣ ವಜಾವಾಗಿರುವ ವಿಚಾರ ನನಗೆ ಗೊತ್ತಿದೆಯಾ ಎಂದರೆ ಸಾಕ್ಷಿ ಇಲ್ಲವೆಂದು ನುಡಿದಿರುತ್ತಾರೆ. ನಿಆರ್-2 ರಂತೆ ಅಪಘಾತ ಸಮಯದಲ್ಲಿ ವಿಮೆ ಚಾಲ್ತಿಯಲ್ಲಿರುವುದರಿಂದ ಅಪಘಾತದ ಪರಿಹಾರ ನೀಡಲು ನಮ್ಮ ಕಂಪನಿಯವರು ಬಾದ್ಯರು ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯ ಮೂರನೇ ಖಂಡಿಕೆಯಲ್ಲಿ ತಿಳಿಸಿರುವ ವಿಚಾರದ ಬಗ್ಗೆ ರುಜುವಾತು ಪಡಿಸಲು ದಾಖಲೆಗಳು ಇವೆಯಾ ಎಂದರೆ ಸಾಕ್ಷಿ ದಾಖಲೆಗಳು ಇಲ್ಲವೆಂದು ನುಡಿದಿರುತ್ತಾರೆ.

ಮರುವಿಚಾರಣೆಃ ಇಲ್ಲ

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಒ**

**ಸೀನಿಯರ್ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.**

**ಕಡೂರು.**